ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 03 ನೇ ಮಾರ್ಚ್, 2020

ರಾಜ್ಯದಲ್ಲಿರುವ ಸಹಕಾರ ಸಂಘಗಳ ಬಗ್ಗೆ

ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :-

152 (134) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳೆಷ್ಟು; ಅವು ಯಾವುವು ; (ಗ್ರಾಮವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ 03 ವರ್ಷಗಳಿಂದ ಸಂಘಗಳ ಕಟ್ಟಡವನ್ನು ಕಟ್ಟಲು ಸರ್ಕಾರವು ಅನುದಾನ ಬಿಡುಗಡೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಯಾವ ಸಂಘಕ್ಕೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಪ್ರಸ್ತುತ ಸಂಘದಲ್ಲಿರುವ ಸದಸ್ಯರ ಸಂಖ್ಯೆ ಎಷ್ಟು ; ಹಾಗೂ ಮಹಿಳಾ ಸದಸ್ಯರ ಸಂಖ್ಯೆ ಎಷ್ಟು ; ಎಷ್ಟು ಜನ ಸದಸ್ಯರಿಗೆ /ಮಹಿಳಾ ಸದಸ್ಯರಿಗೆ ಸಾಲವನ್ನು ಮಂಜೂರು ಮಾಡಲಾಗಿದೆ?